5. ಶಾಸನ ರಚನೆ :

I ವಿಧೇಯಕಗಳನ್ನು ಮಂಡಿಸುವುದು

1. ಕರ್ನಾಟಕ ಗೋವಧೆ ಪ್ರತಿಬಂಧಕ ಮತ್ತು ಜಾನುವಾರು ಪರಿರಕ್ಷಣೆ (ತಿದ್ದುಪಡಿ) ವಿಧೇಯಕ, 2012
ಮಂಡನೆಗೆ ಅನುಮತಿ ಕೋರಿಕೆ

ಶ್ರೀ ರೇವುನಾಯಕ್ ಬೆಳಮಗಿ (ಪಶುಸಂಗೋಪನೆ ಹಾಗೂ ಲೋಕ ಶಿಕ್ಷಣ, ಗ್ರಂಥಾಲಯ, ಸಣ್ಣ ಉಳಿತಾಯ ಮತ್ತು ಲಾಟರಿ ಸಚಿವರು) :– ಮಾನ್ಯ ಅಧ್ಯಕ್ಷರೆ, ಮುದ್ರಿತವಾದ ವಿಧಾನಸಭಾ ಕನ್ನಡ ಅವತರಣಿಕೆಯ ವಿಧೇಯಕದ ಮುಖ್ಯ ಶೀರ್ಷಿಕೆಯಲ್ಲಿ "ಕರ್ನಾಟಕ ಗೋವಧೆ ಪ್ರತಿಬಂಧಕ ಮತ್ತು ಜಾನುವಾರು ಪರಿರಕ್ಷಣೆ(ತಿದ್ದುಪಡಿ) ವಿಧೇಯಕ, 2011" ಎಂಬುದರ ಬದಲು "ಕರ್ನಾಟಕ ಗೋವಧೆ ಪ್ರತಿಬಂಧಕ ಮತ್ತು ಜಾನುವಾರು ಪರಿರಕ್ಷಣೆ (ತಿದ್ದುಪಡಿ) ವಿಧೇಯಕ, 2012" ಅನ್ನು ಮಂಡಿಸಲು ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವನೆ ಮಂಡಿಸಲಾಯಿತು.

ಈಗ ಪ್ರಸ್ತಾವನೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ.

ಪ್ರಸ್ತಾವನೆ ಹೀಗಿದೆ:

2012ನೇ ಸಾಲಿನ ಕರ್ನಾಟಕ ಗೋವಧೆ ಪ್ರತಿಬಂಧಕ ಮತ್ತು ಜಾನುವಾರು ಪರಿರಕ್ಷಣೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಸಭೆಯು ಅನುಮತಿ ನೀಡಬೇಕು.

ಪ್ರಸ್ತಾವದ ಪರವಾಗಿರುವವರು "ಹೌದು"ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ"ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು ಅಂಗೀಕೃತವಾಗಿದೆ.

ಮಾನ್ಯ ಮಂತ್ರಿಗಳು ಈಗ ದಯವಿಟ್ಟು ವಿಧೇಯಕವನ್ನು ಮಂಡಿಸಬೇಕು.

ಶ್ರೀ ರೇವುನಾಯಕ್ ಬೆಳಮಗಿ (ಪಶುಸಂಗೋಪನೆ ಹಾಗೂ ಲೋಕ ಶಿಕ್ಷಣ, ಗ್ರಂಥಾಲಯ, ಸಣ್ಣ ಉಳಿತಾಯ ಮತ್ತು ಲಾಟರಿ ಸಚಿವರು) :– ಮಾನ್ಯ ಅಧ್ಯಕ್ಷರೆ, 2012ನೇ ಸಾಲಿನ ಕರ್ನಾಟಕ ಗೋವಧೆ ಪ್ರತಿಬಂಧಕ ಮತ್ತು ಜಾನುವಾರು ಪರಿರಕ್ಷಣೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

(ಅನುಬಂಧ–2)

2. ಶರಣ ಬಸವ ವಿಶ್ವವಿದ್ಯಾಲಯ ವಿಧೇಯಕ, 2012 ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಸಿ.ಟಿ. ರವಿ (ಉನ್ನತ ಶಿಕ್ಷಣ ಸಚಿವರು) : ಮಾನ್ಯ ಅಧ್ಯಕ್ಷರೆ, 2012ನೇ ಸಾಲಿನ ಶರಣ ಬಸವ ವಿಶ್ವವಿದ್ಯಾಲಯ ವಿಧೇಯಕವನ್ನು ಮಂಡಿಸಲು ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವನೆ ಮಂಡಿಸಲಾಯಿತು.

ಈಗ ಪ್ರಸ್ತಾವನೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ.

ಪ್ರಸ್ತಾವನೆ ಹೀಗಿದೆ:

2012ನೇ ಸಾಲಿನ ಶರಣ ಬಸವ ವಿಶ್ವವಿದ್ಯಾಲಯ ವಿಧೇಯಕವನ್ನು ಮಂಡಿಸಲು ಸಭೆಯು ಅನುಮತಿ ನೀಡಬೇಕು.

ಪ್ರಸ್ತಾವದ ಪರವಾಗಿರುವವರು "ಹೌದು"ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ"ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು ಅಂಗೀಕೃತವಾಗಿದೆ.